ಇ) ಈ ಕಾಲೇಜಿಗೆ ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾದ ಮಾನ್ಯತೆ ದೊರಕಿತ್ತೆ?

ಡಾ॥ ಎ.ಬಿ. ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು.

ಆ) ಇಲ್ಲ.

ಇ) ಇಲ್ಲ.

ಗ್ರಾಮೀಣ ರಸ್ತೆಗಳ ಅಭಿವೃದ್ಧಿ

1049 - ಶ್ರೀ ಸಿಂಧ್ಯ ಪಿ.ಜಿ.ಆರ್. (ಕನಕಪುರ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಪ್ರತಿಯೊಂದು ವಿಧಾನಸಭಾ ಕ್ಷೇತ್ರದಲ್ಲಿ ರಸ್ತೆಗಳ ಅಭಿವೃದ್ಧಿಗಾಗಿ ಮಾರ್ಚ್ 2000ರ ಒಳಗೆ 1.00 ಕೋಟಿ ರೂ.ಗಳನ್ನು ಖರ್ಚು ಮಾಡಬೇಕೆಂದು ಸರ್ಕಾರ ಆಜ್ಞೆ ಮಾಡಿರುವುದು ನಿಜವೆ?

ಆ) ಹಾಗಿದ್ದಲ್ಲಿ ವಿಧಾನಸಭಾ ಕ್ಷೇತ್ರವಾರು ಎಷ್ಟು ಹಣ ಬಿಡುಗಡೆ ಮಾಡಲಾಗಿದೆ? (ವಿವರಗಳನ್ನು ಒದಗಿಸುವುದು)

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ರಾಜ್ಯ ಸರ್ಕಾರವು ಪ್ರತಿ ತಾಲ್ಲೂಕಿಗೆ ರೂ. 100.00 ಲಕ್ಷದಂತೆ ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಜಿಲ್ಲಾ ಪಂಚಾಯತಿಗಳಿಗೆ ಸೂಚಿಸಿರುತ್ತದೆ. ಒಂದು ವೇಳೆ ಉದ್ಯೋಗ ಭರವಸೆ ಮತ್ತು ಸ್ವಾಂಪ್ ಡ್ಯೂಟಿ ಯೋಜನೆಗಳಡಿ ಅನುದಾನ ಲಭ್ಯವಿಲ್ಲದೆ ಇದ್ದಲ್ಲಿ ಕ್ರಿಯಾ ಯೋಜನೆಯನ್ನು ರೂ. 60.00 ಲಕ್ಷಗಳಿಗೆ ಸೀಮಿತಗೊಳಿಸಲು ತಿಳಿಸಲಾಗಿರುತ್ತದೆ.

ಆ) ರಾಜ್ಯ ಸರ್ಕಾರದಿಂದ ಬಿಡುಗಡೆಯಾಗಬೇಕಾಗಿರುವ ಹೆಚ್ಚುವರಿ ಅನುದಾನವನ್ನು ಸದ್ಯದಲ್ಲಿ ಬಿಡುಗಡೆ ಮಾಡಲಾಗುವುದು.

ಪದವಿ ಕಾಲೇಜುಗಳಿಗೆ ಸ್ವಂತ ಕಟ್ಟಡ

1050 - ಶ್ರೀ ಸದಾನಂದ ಗೌಡ ಡಿ.ವಿ. (ಪುತ್ತೂರು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಸ್ತುತ ಕರ್ನಾಟಕದಲ್ಲಿ ಎಷ್ಟು ಪದವಿ ಕಾಲೇಜುಗಳಿವೆ? ಸ್ವಂತ ಕಟ್ಟಡಗಳಿರುವುದಿಲ್ಲ, ಈ ಬಗ್ಗೆ ಕಳೆದ 3 ವರ್ಷಗಳಿಂದ ಸರ್ಕಾರ ಹಮ್ಮಿಕೊಂಡ ಕಾರ್ಯಕ್ರಮಗಳೇನು? ಇದಕ್ಕಾಗಿ ಒದಗಿಸಲಾದ ಒಟ್ಟು ಯೋಜನಾ ವೆಚ್ಚವೆಷ್ಟು?